# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:- ಬೆಂಗಳೂರು ನಗರ ಜಿಲ್ಲೆಯ ಬನಶಂಕರಿಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಸಮುದಾಯ ಭವನ ನಿರ್ಮಾಣ ಕಾಮಗಾರಿಯ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 24 ಬಿಎಂಎಸ್ 2019, ದಿನಾಂಕ:14.02.2020.
2. ಸರ್ಕಾರದ ಆದೇಶ ಸಂಖ್ಯೆ; ಬಿಸಿಡಬ್ಲ್ಯೂ 26 ಬಿಎಂಎಸ್ 2019 ದಿನಾಂಕ:02.03.2020.
3. ಸರ್ಕಾರದ ಪತ್ರ ಸಂಖ್ಯೆ: ಹಿಂವಕ 479 ಬಿಎಂಎಸ್ 2020, ದಿನಾಂಕ:08.10.2020.
4. ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಅಮಾಜ-3/ಸಿಆರ್-29/2019-20, ದಿನಾಂಕ:17.09.2022.

******

<u>ಪ್ರಸ್ತಾವನೆ:-</u>

ಮೇಲೆ ಓದಲಾದ (1)ರ ಆದೇಶದಲ್ಲಿ 2019-20ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 170ರಲ್ಲಿ ಘೋಷಿಸಿದಂತೆ ಅಲೆಮಾರಿ ಜನಾಂಗದವರು ತಮ್ಮ ಸಮುದಾಯದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಹಾಗೂ ಸಮುದಾಯದ ಚಟುವಟಿಕೆಗಳನ್ನು ನಡೆಸಲು ಅಲೆಮಾರಿ/ಅರೆಅಲೆಮಾರಿ ಸಮುದಾಯ ಭವನವನ್ನು ನಿರ್ಮಿಸಲು ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಬೆಂಗಳೂರಿನಲ್ಲಿ ರೂ.10.00 ಕೋಟಿ ವೆಚ್ಚದಲ್ಲಿ 01 ಅಲೆಮಾರಿ/ಅರೆಅಲೆಮಾರಿ ಸಮುದಾಯ ಭವನದ ಕಟ್ಟಡ ಕಾಮಗಾರಿಯನ್ನು ಕರ್ನಾಟಕ ಗೃಹ ಮಂಡಳಿ ವತಿಯಿಂದ ಕೈಗೊಳ್ಳಲು ಅನುಮತಿ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಇಲಾಖಾ ವಶದಲ್ಲಿರುವ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಬನಶಂಕರಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಈ ನಿಲಯದ ಸ್ವಂತ ಕಟ್ಟಡದ ಮುಂಭಾಗದಲ್ಲಿ ಸುಮಾರು 100X100 ಅಡಿಗಿಂತಲೂ ಹೆಚ್ಚು ಖಾಲಿ ಇರುವ ನಿವೇಶನವನ್ನು ಅಲೆಮಾರಿ/ಅರೆಅಲೆಮಾರಿ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಬಳಸಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ (4)ರ ಪ್ರಸ್ತಾವನೆಯಲ್ಲಿ ಸರ್ಕಾರದ ಆದೇಶದಂತೆ ಇದುವರೆಗೆ ರಾಜ್ಯವಲಯ ಲೆಕ್ಕಶೀರ್ಷಿಕೆ 4225-03-800-0-05 (132) ರಡಿ ರೂ.9.00 ಕೋಟಿಗಳನ್ನು ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು, ಇವರಿಗೆ ಭವನದ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲು ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ಅಲೆಮಾರಿ/ಅರೆಅಲೆಮಾರಿ ಸಮುದಾಯ ಭವನದ ಕಟ್ಟಡ ಕಾಮಗಾರಿಯು ರೂ.10.00 ಕೋಟಿಗಳ ವೆಚ್ಚದಡಿ ಮಂಜೂರಾಗಿದ್ದು, ಈಗಾಗಲೇ ರೂ.9.00 ಕೋಟಿಗಳನ್ನು ಕರ್ನಾಟಕ ಗೃಹ ಮಂಡಳಿಗೆ ಬಿಡುಗಡೆ ಮಾಡಿರುವುದರಿಂದ ಕಾಮಗಾರಿಯ -

10/10/2022

ಪ್ರಗತಿಯನ್ನಾಧರಿಸಿ ಉಳಿದ ಅನುದಾನವನ್ನು ಬಿಡುಗಡೆ ಮಾಡಬಹುದಾಗಿರುತ್ತದೆ. ಆದ್ದರಿಂದ, ಕಾರ್ಯಪಾಲಕ ಅಭಿಯಂತರರು (ನೋಡಲ್ ಅಧಿಕಾರಿ), ಕರ್ನಾಟಕ ಗೃಹ ಮಂಡಳಿ, ಕೇಂದ್ರ ಕಛೇರಿ, ಬೆಂಗಳೂರು ಇವರು ಸಲ್ಲಿಸಿರುವ ರೂ.995.00 ಲಕ್ಷಗಳ ಪರಿಷ್ಕೃತ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ..

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 241 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 10.10.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬೆಂಗಳೂರು ನಗರ ಜಿಲ್ಲೆಯ ಬನಶಂಕರಿಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಸಮುದಾಯ ಭವನ ನಿರ್ಮಾಣ ಕಾಮಗಾರಿಯನ್ನು ರೂ.995.00 ಲಕ್ಷ (ಒಂಭತ್ತು ನೂರ ತೊಂಬತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಕೆಳಗೆ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. ಅನುಷ್ಠಾನ ಸಂಸ್ಥೆಯು ಸದರಿ ಕಾಮಗಾರಿಯ ಉನ್ನತ ಗುಣಮಟ್ಟ ಕಾಪಾಡಿ ಈ ಆದೇಶ ನೀಡಿರುವ 02 ವರ್ಷದ ಅವಧಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸುವುದು. ಅನುಷ್ಠಾನದಲ್ಲಿ ಯಾವುದೇ ಲೋಪದೋಷಗಳು ಕಂಡು ಬಂದಲ್ಲಿ ಅಥವಾ ಕಾಲಮಿತಿಯನ್ನು ಮೀರಿದ್ದಲ್ಲಿ ನೇರವಾಗಿ ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿರವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು. ಕಾಮಗಾರಿ ವಿಳಂಬದಿಂದಾಗಿ ಸಂಭವಿಸುವ ಆರ್ಥಿಕ ನಷ್ಟದ ವಸೂಲಾತಿಯನ್ನು ನಿಯಮಾನುಸಾರ ಅನುಷ್ಠಾನ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಸದರಿ ಅನುದಾನಕ್ಕೆ ಜಮೆಯಾಗಿರುವ ಬಡ್ಡಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
3. ಸದರಿ ಕಾಮಗಾರಿಗಳಿಗೆ ನಿಯಮಾನುಸಾರ ಕೆ.ಟಿ.ಪಿ.ಪಿ ಅಧಿನಿಯಮ-1999 ಮತ್ತು ನಿಯಮ 2000ರ ಅನ್ವಯ ಟೆಂಡರ್ ಕರೆದು ಅನುಷ್ಠಾನಗೊಳಿಸುವುದು.
4. ಸದರಿ ಕಾಮಗಾರಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ ಹಾಗೂ ನೀಡಿರುವ ಅನುದಾನವನ್ನು ಈ ಆದೇಶದಲ್ಲಿರುವ ಅನುಮೋದಿತ ಕಾಮಗಾರಿಯನ್ನು ಹೊರತುಪಡಿಸಿ ಬೇರೆ ಯಾವ ಉದ್ದೇಶಕ್ಕೆ ಬಳಕೆ ಮಾಡಲು ಅವಕಾಶವಿರುವುದಿಲ್ಲ.
5. ಅನುಮೋದನೆ ನೀಡಿರುವ ಅಂದಾಜು ಮಿತಿಯಲ್ಲಿಯೇ (ಟೆಂಡರ್ ಪ್ರೀಮಿಯಂ ಸೇರಿ) ಅನುಷ್ಠಾನಗೊಳಿಸುವುದು.
6. ಉಪಯುಕ್ತತಾ ಪ್ರಮಾಣ ಪತ್ರವನ್ನು ಸಲ್ಲಿಸುವಾಗ ಮೇಲಿನ ಷರತ್ತುಗಳ ಪಾಲನೆ ಬಗ್ಗೆ ಸಹ ಮಾಹಿತಿಯನ್ನು ನೀಡತಕ್ಕದು.

10/10/22

...3

7. ಸದರಿ ಕಾಮಗಾರಿಯ ವಿವರಗಳು, ಟೆಂಡರ್ work order, sanctioned estimates ಹಾಗೂ ಮಾಸಿಕ ಆರ್ಥಿಕ ಮತ್ತು ಭೌತಿಕ ಪ್ರಗತಿ ವರದಿಯನ್ನು ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಕಛೇರಿಯ ಜಾಲತಾಣದಲ್ಲಿ, ಸಾರ್ವಜನಿಕರ ಮಾಹಿತಿಗಾಗಿ ಅಳವಡಿಸುವುದು.
8. ಅನುದಾನ ಬಿಡುಗಡೆ ಕುರಿತಂತೆ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಕ್ರಮವಹಿಸತಕ್ಕದ್ದು.
9. ಟೆಂಡರ್‌ಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 522 ವೆಚ್ಚ-22/2021, ದಿನಾಂಕ:07.05.2022 ಹಾಗೂ ಸುತ್ತೋಲೆ ಸಂಖ್ಯೆ: ಆಇ 263 ವೆಚ್ಚ-12/2022, ದಿನಾಂಕ:11.05.2022 ಹಾಗೂ ಸುತ್ತೋಲೆ ಸಂಖ್ಯೆ: ಆಇ 128 ವೆಚ್ಚ-12/2021, ದಿನಾಂಕ:10.05.2022 ರನ್ವಯ ಟೆಂಡರ್ ಪ್ರೀಮಿಯಂ ಮೊತ್ತವನ್ನು ಗರಿಷ್ಠ ಶೇ% 5ಕ್ಕೆ ನಿಗಧಿಪಡಿಸತಕ್ಕದ್ದು.
10. ಸದರಿ ಕಾಮಗಾರಿಯ ಅನುಮೋದಿತ ನಕ್ಷೆಗೆ ಬದಲಾಗಿ ಯಾವುದೇ ಬದಲಾವಣೆ ಅಥವಾ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಳ್ಳುವ ಮುನ್ನ ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.
11. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 55 ಪಿಡಬ್ಲ್ಯೂಡಿ ಸೆಲ್ 2001, ದಿನಾಂಕ:17.05.2005 ರನ್ವಯ ಕಾಮಗಾರಿಯ ಪರಿವೀಕ್ಷಣೆಗೆ ಮೂರನೇ ಸಂಸ್ಥೆಯನ್ನು ನೇಮಿಸಿಕೊಳ್ಳುವ ಷರತ್ತಿಗೊಳಪಟ್ಟಿದೆ.

ಈ ಆದೇಶವನ್ನು ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenparveen 10/10/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು ಕರ್ನಾಟಕ ಗೃಹ ಮಂಡಳಿ, ಕಂದಾಯ ಭವನ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
5. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
6. ಖಜನಾಧಿಕಾರಿಗಳು, ರಾಜ್ಯ ಹುಜುರ್ ಖಜಾನೆ, ಬೆಂಗಳೂರು.